# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 871 (882) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 21-12-2021 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | 2019-20 ಮತ್ತು 2021-22ರ ಸಾಲಿನಲ್ಲಿ ರಾಜ್ಯಾದ್ಯಂತ ಬರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಸ್ವಚ್ಛ ಭಾರತ್ ಯೋಜನೆಯಡಿ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು; | ಸ್ವಚ್ಛ ಭಾರತ್ ಯೋಜನೆಯ ಲೆಕ್ಕ ಶೀರ್ಷಿಕೆ 2217-80-800-0-35 ಅಡಿಯಲ್ಲಿ 2019-20 ಮತ್ತು 2021-22 ರ ಸಾಲಿನಲ್ಲಿ ಬಿಡುಗಡೆಯಾದ ಅನುದಾನದ ವಿವರ ಕೆಳಕಂಡಂತಿದೆ;<br>(ರೂ. ಲಕ್ಷಗಳಲ್ಲಿ)<br>ಸಾಲು: 2019-20 / 2021-22<br>ಬಿಡುಗಡೆಯಾದ ಮೊತ್ತ: 857.25 / 4619.32 |
| (ಆ) | ಸದರಿ ಯೋಜನೆಯಲ್ಲಿ ಬಿಡುಗಡೆಯಾದಂತಹ ಅನುದಾನದಲ್ಲಿ ವೆಚ್ಚ ಮಾಡಲಾದ ಅನುದಾನ ಹಾಗೂ ಉಳಿದ ಅನುದಾನವೆಷ್ಟು; (ಸಂಪೂರ್ಣ ವಿವರ ಒದಗಿಸುವುದು) | ಸ್ವಚ್ಛ ಭಾರತ ಯೋಜನೆಯಡಿ ಬಿಡುಗಡೆಯಾದ ಮತ್ತು ವೆಚ್ಚ ಮಾಡಲಾದ ಅನುದಾನದ ವಿವರಗಳನ್ನು **ಅನುಬಂಧ-1** ರಲ್ಲಿ ಲಗತ್ತಿಸಿದೆ. |
| (ಇ) | ಬಿಡುಗಡೆಯಾಗಿರುವಂತಹ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) | ಸ್ವಚ್ಛ ಭಾರತ ಯೋಜನೆಯಡಿ ಬಿಡುಗಡೆಯಾದ ಅನುದಾನದಲ್ಲಿ ಕೈಗೊಳ್ಳಲಾದ ಘನತ್ಯಾಜ್ಯ ವಸ್ತು ನಿರ್ವಹಣೆ ಘಟಕದ ಕಾಮಗಾರಿಗಳ ಜಿಲ್ಲಾವಾರು ವಿವರಗಳನ್ನು **ಅನುಬಂಧ-2** ರಲ್ಲಿ ಲಗತ್ತಿಸಿದೆ. |
| (ಈ) | ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?(ಸಂಪೂರ್ಣ ಮಾಹಿತಿಯನ್ನು ಒದಗಿಸುವುದು) | ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ;<br>• ಘನತ್ಯಾಜ್ಯ ವಸ್ತುಗಳ ನಿರ್ವಹಣೆಗೆ ಅಗತ್ಯವಿರುವ ವಾಹನಗಳು/ ಯಂತ್ರೋಪಕರಣಗಳನ್ನು ನೇರವಾಗಿ GeM ಪೋರ್ಟಲ್ ಮೂಲಕ ಖರೀದಿ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br>• ಘನತ್ಯಾಜ್ಯ ವಸ್ತು ನಿರ್ವಹಣೆಗೆ ಸಂಬಂಧಿಸಿದಂತೆ ರೂ. 5.00 ಕೋಟಿಗಳವರೆಗಿನ ಅಂದಾಜುಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ತಾಂತ್ರಿಕ ಮಂಜೂರಾತಿ ನೀಡುವ ಅಧಿಕಾರವನ್ನು ಜಿಲ್ಲಾಡಳಿತಕ್ಕೆ ಪ್ರತ್ಯಾಯೋಜಿಸಲಾಗಿರುತ್ತದೆ.<br>• ಮಾದರಿ ಘನ ತ್ಯಾಜ್ಯ ವಸ್ತು ನಿರ್ವಹಣೆ ಬೈಲಾ ಮತ್ತು ಘನ ತ್ಯಾಜ್ಯ ವಸ್ತು ನಿರ್ವಹಣೆ ರಾಜ್ಯ ನೀತಿ ಮತ್ತು ಕಾರ್ಯತಂತ್ರದ ಮೂಲಕ SWM service |

| | | | |
|---|---|---|---|
| | | | charges & penalty ಗಳನ್ನು ಜಾರಿಗೆ ತರುವ ಮೂಲಕ ಸುಸ್ಥಿರತೆ ತರಲು ಕ್ರಮ ವಹಿಸಿದೆ.<br>• ಕಾಲಕಾಲಕ್ಕೆ ಪ್ರಗತಿ ಪರಿಶೀಲನಾ ಸಭೆಗಳನ್ನು ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ನಅಇ 218 ಸಿಎಸ್ಎಸ್ 2021

[ಎನ್. ನಾಗರಾಜ್ (ಎಂ.ಟಿ.ಬಿ.)]
ಪೌರಾಡಳಿತ, ಸಣ್ಣ ಕೈಗಾರಿಕೆ, ಸಾರ್ವಜನಿಕ ವಲಯ ಉದ್ಯಮಗಳ
ಸಚಿವರು.